**All India Radio: Bangalore**
**Regional Bulletin In Kannada**
**11.01.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**11.01.2026 / 2.30 p.m.**
**<><><><>**

ಮುಖ್ಯಾಂಶಗಳು

೧. ಬಳ್ಳಾರಿ ಸಂಘರ್ಷ ಪ್ರಕರಣ ; ೮ ಮಂದಿ ಸಿಐಡಿ ಅಧಿಕಾರಿಗಳಿಂದ ತನಿಖೆ ಆರಂಭ

೨. ಅಧಿಕಾರ ಬದಲಾವಣೆ ವಿಚಾರ ಮಾಧ್ಯಮಗಳ ಸೃಷ್ಟಿ - ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ

೩. ಮೈಸೂರಿನಲ್ಲಿ ಸ್ವಚ್ಛತೆಗಾಗಿ ಜಾಗೃತಿ ನಡಿಗೆ ; ಆರೋಗ್ಯ ಕಾಪಾಡಿಕೊಳ್ಳುವಂತೆ ಸಚಿವ ಮಹಾದೇವಪ್ಪ ಕರೆ

೪. ಜಿಲ್ಲೆಗೊಂದು ಮಿನಿ ಚಿತ್ರಮಂದಿರ ನಿರ್ಮಿಸುವಂತೆ ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ ಸರ್ಕಾರಕ್ಕೆ ಮನವಿ

೫. ರಾಜ್ಯದ ಕೆಲ ಜಿಲ್ಲೆಗಳಲ್ಲಿ ಶೀತ ಅಲೆ ; ೪ ಜಿಲ್ಲೆಗಳಿಗೆ ಹವಮಾನ ಇಲಾಖೆ ಯಲ್ಲೋ ಅಲರ್ಟ್ ಘೋಷಣೆ

**<><><><>**

**ಬ್ಯಾನರ್ ಸಂಘರ್ಷ ಹಾಗೂ ಕಾಂಗ್ರೆಸ್ ಕಾರ್ಯಕರ್ತ ಸಾವನ್ನಪ್ಪಿದ ಪ್ರಕರಣದ ತನಿಖೆಗೆ ಸಿಐಡಿ ಎಸ್ಪಿ ಹರ್ಷಪ್ರಿಯಂವದ, ಹಾಗೂ ಇಬ್ಬರು ಡಿವೈಎಸ್ಪಿ ಮತ್ತು ಮೂವರು ಸಿಪಿಐಗಳನ್ನು ಒಳಗೊಂಡ ಎಂಟು ಜನರ ತಂಡ ಇಂದು ಬಳ್ಳಾರಿ ನಗರಕ್ಕೆ ಆಗಮಿಸಿದೆ.**

**ಪ್ರಕರಣಕ್ಕೆ ಸಂಬಂಧಿಸಿದಂತೆ, ಆರು ಪ್ರಕರಣಗಳು ದಾಖಲಾಗಿದ್ದು ಅದರಲ್ಲಿ ೪ ಪ್ರಕರಣಗಳನ್ನು ರಾಜ್ಯ ಸರ್ಕಾರ ಸಿಐಡಿ ತನಿಖೆಗೆ ವಹಿಸಿದೆ.**

**ಸಿಐಡಿ ಅಧಿಕಾರಗಳ ತಂಡ ಇಂದು ಬಳ್ಳಾರಿ ಪೊಲೀಸ್ ವರಿಷ್ಠಾಧಿಕಾರಿ ಸಮನ್ ಪನ್ನೇಕರ್ ಅವರ ಕಚೇರಿಗೆ ಅಗಮಿಸಿ ಮಾಹಿತಿ ಕಲೆಹಾಕಿತು. ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಸ್ ಫೈಲ್ ಪಡೆಯುವುದರ ಜೊತೆಗೆ ಘಟನೆ ಕುರಿತು ಸ್ಥಳೀಯ ಅಧಿಕಾರಿಗಳ ಜೊತೆಗೆ ತಂಡ ಮಾಹಿತಿ ಪಡೆಯಿತು.**

**<><><><>**

**ಅಧಿವೇಶನದಲ್ಲಿ ದ್ವೇಷ ಭಾಷಣ ಮಸೂದೆ ಸರ್ವಾನುಮತದಿಂದ ಅಂಗೀಕಾರವಾಗಿದ್ದು, ರಾಜ್ಯಪಾಲರಿಗೆ ಕಳುಹಿಸಿಕೊಡಲಾಗಿದೆ. ಮಸೂದೆಯನ್ನು ತಿರಸ್ಕರಿಸಿಲ್ಲ. ರಾಜ್ಯಪಾಲರು ಕರೆದಾಗ ಈ ಬಗ್ಗೆ ವಿವರಣೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿಯಲ್ಲಿ ಕಾನೂನು ಬಾಹಿರ ವಿರುದ್ಧ ಗಣಿಗಾರಿಕೆ ವಿರುದ್ಧ ಪಾದಯಾತ್ರೆ ಮಾಡಲಾಗಿತ್ತು. ಬಿಜೆಪಿ ನಾಯಕರು ಪಾದಯಾತ್ರೆ ಯಾಕೇ ಮಾಡಬೇಕು ಎಂದು ಪ್ರಶ್ನಿಸಿದ್ದಾರೆ. ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರ ಮಾಧ್ಯಮಗಳ ಸೃಷ್ಟಿಯೆಂದು ಹೇಳಿದ್ದಾರೆ.**

<><><>

ಮೈಸೂರಿನ ಸ್ವಚ್ಚತೆಗಾಗಿ ಫಿಟ್ ಮೈಸೂರು ಸಾಮೂಹಿಕ ಆರೋಗ್ಯ ಮತ್ತು ಜಾಗೃತಿ ನಡಿಗೆಯಲ್ಲಿ ಇಂದು ಮೈಸೂರಿನ ಸಾವಿರಾರು ಮಂದಿ ನಾಗರಿಕರು ಹೆಜ್ಜೆ ಹಾಕಿ ಸ್ವಚ್ಚತೆಯ ಮಹತ್ವ ಸಾರಿದರು.

ಮೈಸೂರು ವಿಶ್ವವಿದ್ಯಾನಿಲಯ, ನಗರಪಾಲಿಕೆ, ಮೈಸೂರು ಜಿಲ್ಲಾ ಪತ್ರಕರ್ತರ ಸಂಘ, ಮೈಸೂರು ಜಿಮ್ ಅಸೋಸಿಯೇಷನ್, ಜಿಎಸ್‌ಎಸ್, ಸಿಎಸ್‌ಆರ್ ಸೇರಿದಂತೆ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ೫ ಕಿಲೋ ಮೀಟರ್ ದೂರದ ಫಿಟ್ ಮೈಸೂರು ಜಾಗೃತಿ ನಡಿಗೆ ಆಯೋಜಿಸಲಾಗಿತ್ತು.

ನಾಡಗೀತೆ, ವಂದೇಮಾತರಂ ಗೀತೆಗೆ ಧ್ವನಿಗೂಡಿಸಿ ಸಂವಿಧಾನ ಪೀಠಿಕೆ ಓದಿ ನಾವೆಲ್ಲರೂ ಒಂದೇ ಎಂಬ ಸಂದೇಶ ಸಾರಿದರು. ಮೈಸೂರು ನಗರ ಪಾಲಿಕೆ ಆಯುಕ್ತ ಶೇಕ್ ಆಸೀಫ್ ತನ್ವೀರ್ ಸ್ವಚ್ಚತಾ ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮಾತನಾಡಿ, ಕ್ಲೀನ್ ಮೈಸೂರು, ಫೀಟ್ ಮೈಸೂರು ಎಂಬ ವಾಕ್ಯದೊಂದಿಗೆ ಆರಂಭಸಿರುವ ನಡಿಗೆ ಕಾರ್ಯಕ್ರಮ ಶ್ಲಾಘನೀಯ. ಎಲ್ಲರೂ ಮೊದಲು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು.

<><><>

ಕನ್ನಡ ಚಲನಚಿತ್ರೋದ್ಯಮದ ಉತ್ತೇಜನ ಹಾಗೂ ಪ್ರೋತ್ಸಾಹಕ್ಕಾಗಿ ರಾಜ್ಯ ಸರ್ಕಾರ ಜಿಲ್ಲೆಗೊಂದು ಮಿನಿ ಚಿತ್ರಮಂದಿರ ನಿರ್ಮಿಸಬೇಕು ಎಂದು ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ ಆಗ್ರಹಿಸಿದ್ದಾರೆ.

ಮೈಸೂರಿನ ರಂಗಾಯಣದಲ್ಲಿ ಆಯೋಜಿಸಿರುವ ಬಹುರೂಪಿ ಬಾಬಾ ಸಾಹೇಬ್ ರಾಷ್ಟ್ರೀಯ ನಾಟಕೋತ್ಸವದ ಅಂಗವಾಗಿ ಭೂಮಿಗೀತ ವೇದಿಕೆಯಲ್ಲಿ ಹಮ್ಮಿಕೊಂಡಿದ್ದ ಚಲನಚಿತ್ರೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಡಾ: ರಾಜಕುಮಾರ್ ಕನ್ನಡ ಚಿತ್ರರಂಗಕ್ಕೆ ಬಂದ ೧೪ ವರ್ಷಗಳಲ್ಲಿ ೧೦೦ ಸಿನಿಮಾಗಳಲ್ಲಿ ಒಬ್ಬರೇ ನಟಿಸಿದ್ದರು, ಉಳಿದಂತೆ ಆ ಕಾಲಘಟ್ಟದಲ್ಲಿ ಉಳಿದ ಎಲ್ಲಾ ನಟರು ೧೦೦ ಸಿನಿಮಾದಲ್ಲಿ ನಟಿಸಿದ್ದರು. ಚಲನಚಿತ್ರಗಳಲ್ಲಿ ಆತ್ಮವಿರುವ ಸಿನಿಮಾಗಳು ಮಾತ್ರ ಗೆಲ್ಲುತ್ತವೆ. ದೇಹವಿರುವ ಸಿನಿಮಾಗಳು ಗೆಲ್ಲಲಾರವು ಎಂದು ಅಭಿಪ್ರಾಯಪಟ್ಟಿದ್ದಾರೆ.

ಕೇರಳದಲ್ಲಿ ೧೦೦ಕ್ಕೂ ಹೆಚ್ಚು ಮಿನಿಚಿತ್ರಮಂದಿರಗಳಿವೆ, ಅದರಂತೆ ನಮ್ಮ ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಪ್ರಾಯೋಗಿಕವಾಗಿ ಒಂದೊಂದು ಮಿನಿ ಚಿತ್ರಮಂದಿರಗಳುನ್ನು ನಿರ್ಮಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಬಹುರೂಪಿಯಲ್ಲಿ ಅಂಬೇಡ್ಕರ್ ಕುರಿತು ಚಲನಚಿತ್ರೋತ್ಸವ ನಡೆಸುತ್ತಿರುವುದು ಸಂತಸ ತಂದಿದೆ ಎಂದು ಹೇಳಿದ್ದಾರೆ.

<><><>

ಬ್ಯಾರಿ ಭಾಷೆ ಕೇವಲ ಒಂದು ಭಾಷೆಯಲ್ಲ. ಅದು ಸಂಸ್ಕೃತಿಯೂ ಆಗಿದೆ ಎಂದು ಕರ್ನಾಟಕ ವಿಶ್ವವಿದ್ಯಾನಿಲಯದ ಕುಲಪತಿ ಎ.ಎಂ.ಖಾನ್ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನಲ್ಲಿ ಬ್ಯಾರಿಭಾಷಾ ಸಂಶೋಧನಾ ಮತ್ತು ಅಭಿವೃದ್ಧಿ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬ್ಯಾರಿ ಭಾಷೆಗೆ ಜಾನಪದ ಹಿನ್ನೆಲೆಯೂ ಇದೆ. ಹೀಗಾಗಿ ಬ್ಯಾರಿಗಳನ್ನು ಭಾಷೆ ಮತ್ತು ವ್ಯಾಪಾರ ಪರಿಧಿಗೆ ಸೀಮಿತಗೊಳಿಸದೆ ಬ್ಯಾರಿ ಪರಂಪರೆಯನ್ನು ಎತ್ತಿ ಹಿಡಿಯುವ ಕೆಲಸ ಆಗಬೇಕಿದೆ ಎಂದು ತಿಳಿಸಿದ್ದಾರೆ. ನೂತನ ಶಿಕ್ಷಣ ನೀತಿಯಲ್ಲಿ ಸಾಧಕಗಳೂ ಇವೆ. ಜೊತೆಗೆ ಕೌಶಲ್ಯ ಅಭಿವೃದ್ಧಿಗೆ ಅವಕಾಶವೂ ಇದೆ. ಈ ನಿಟ್ಟಿನಲ್ಲಿ ಮುಸ್ಲಿಂ ಶಿಕ್ಷಣ ಸಂಸ್ಥೆಗಳು ಗಮನಹರಿಸಿ ಮುಸ್ಲಿಂ ಯುವ ಸಮೂಹದ ಕೌಶಲವನ್ನು ಹೊರತೆಗೆಯಲು ಪ್ರಯತ್ನಿಸಬೇಕಿದೆ ಎಂದು ಅವರು ಹೇಳಿದ್ದಾರೆ.

<><><>

<><><><>

ವಿಕಸಿತ ಭಾರತ ಜಿ ರಾಮ್ ಜಿ ಯೋಜನೆ ಮರುನಾಮಕರಣದ ನಿರ್ಧಾರದ ವಿರುದ್ಧ ಕಾನೂನು ಹೋರಾಟ ಮಾಡಲು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಹೊಸ ಮಸೂದೆ ಹಿಂಪಡೆಯಬೇಕೆಂದು ಹೋರಾಟ ರೂಪಿಸಲಾಗುತ್ತಿದೆ ಎಂದು ಆಹಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಈ ಮಸೂದೆ ವಾಪಸ್ ಪಡೆಯುವಂತೆ ನಿರಂತರವಾಗಿ ಹೋರಾಟಗಳನ್ನು ನಡೆಸಬೇಕಾಗಿದೆ. ೫ ಕಿಲೋ ಮೀಟರ್ ಪಾದಯಾತ್ರೆ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ಹೇಳಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಮನ್ರೇಗಾ ಯೋಜನೆಯನ್ನು ಸುಧಾರಣೆ ಮಾಡಿ, ಜಿ ರಾಮ್ ಜಿ ಯೋಜನೆ ಜಾರಿಗೆ ತಂದಿದೆ. ಇದು ೨೦೪೭ ರ ವಿಕಸಿತ ಭಾರತ'ದ ಗುರಿಯನ್ನು ತಲುಪಲು ಪೂರಕವಾಗಿದೆ ಎಂದು ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ದೇವನಹಳ್ಳಿಯಲ್ಲಿ ಸುದ್ದಿಗಾರರೊಂದಿಗೆ, ಮಾತನಾಡಿದ ಅವರು, ಜಿ ರಾಮ್ ಜಿ ಯೋಜನೆಯಲ್ಲಿ ಜಿಯೋ ಟ್ಯಾಗ್, ಸ್ಯಾಟಲೈಟ್ ಚಿತ್ರ, ಗ್ರಾಮ ಪಂಚಾಯಿತಿಗೆ ಅಧಿಕಾರ, ಗತಿಶಕ್ತಿ ಕಚೇರಿಗೆ ಸಂಪರ್ಕ ಮೊದಲಾದ ಕ್ರಮಗಳ ಮೂಲಕ ಯೋಜನೆಯಲ್ಲಿ ಅಕ್ರಮವನ್ನು ತಡೆಗಟ್ಟಲಾಗಿದೆ. ಗ್ರಾಮೀಣ ಭಾರತದ ಅಭಿವೃದ್ಧಿಯ ದೃಷ್ಟಿಯಿಂದ ಹಾಗೂ ಯಾವುದೇ ಹಣ ಪೋಲಾಗುವುದನ್ನು ತಡೆಯುವ ಉದ್ದೇಶದಿಂದ ಈ ಯೋಜನೆ ತರಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><><>

ರೈತರ ನೀರಾವರಿ ವೆಚ್ಚ ಕಡಿತಗೊಳಿಸುವುದು ಮತ್ತು ಡೀಸೆಲ್ ಪಂಪ್‌ಗಳ ಬದಲಿಗೆ ಸೌರ ಪಂಪ್‌ಗಳನ್ನು ಪ್ರೋತ್ಸಾಹಿಸುವುದು ಪ್ರಧಾನಮಂತ್ರಿ ಕುಸುಮ್ ಯೋಜನೆಯ ಮುಖ್ಯ ಉದ್ದೇಶವಾಗಿದೆ. ರೈತರು ಇದರ ಸದುಪಯೋಗ ಪಡಿಸಿಕೊಳ್ಳಬೇಕಂದು ಹರಿಹರ ಶಾಸಕ ಬಿ.ಪಿ.ಹರೀಶ್ ಕರೆ ನೀಡಿದ್ದಾರೆ. ಹರಿಹರ ತಾಲೂಕಿನ ಜಿಗಳಿ ಗ್ರಾಮದಲ್ಲಿ ಪಿಎಂ ಕುಸುಮ್ ಯೋಜನೆಯಡಿ ನಿರ್ಮಾಣ ಮಾಡಿರುವ ಸೋಲಾರ್ ಕೊಳವೆ ಬಾವಿಗೆ ಚಾಲನೆ ನೀಡಿ ಅವರು ಮಾತನಾಡಿದರು. ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ಈ ಮೂಲಕ ಆದಾಯ ದ್ವಿಗುಣಮಾಡಿಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ತಿಳಿಸಿದ್ದಾರೆ. ರೈತರು ಉತ್ಪಾದಿಸುವ ಹೆಚ್ಚುವರಿ ವಿದ್ಯುತ್‌ನ್ನು ಸರ್ಕಾರಕ್ಕೆ ಮಾರಾಟ ಮಾಡುವ ಮೂಲಕ ಆದಾಯ ಹೆಚ್ಚಿಸುವುದು, ಕಾರ್ಬನ್ ಹೊರಸೂಸುವಿಕೆಯನ್ನು ಕಡಿಮೆ ಮಾಡಿ ಪರಿಸರ ರಕ್ಷಣೆ ಮಾಡುವುದು ಈ ಯೋಜನೆಯ ಉದ್ದೇಶ ಎಂದು ಹೇಳಿದ್ದಾರೆ.

<><><><>

ರಾಜ್ಯದ ಒಂದೆರೆಡು ಕಡೆ ಮಳೆಯಾಗಿದೆ. ಅತೀ ಕನಿಷ್ಠ ತಾಪಮಾನ ೧೦.೪ ಡಿಗ್ರಿ ಸೆಲ್ಸಿಯಸ್ ಬೀದರ್‌ನಲ್ಲಿ ದಾಖಲಾಗಿದೆ. ಕಳೆದ ಕೆಲ ದಿನಗಳಿಂದ ರಾಜ್ಯದಲ್ಲಿ ಶೀತ ಅಲೆಯ ಪ್ರಮಾಣ ಹೆಚ್ಚಾಗಿದ್ದು, ಹವಮಾನ ಇಲಾಖೆ ೪ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಣೆ ಮಾಡಿದೆ. ಬೆಂಗಳೂರಿನಲ್ಲಿ ಮಂಜುಮುಸುಕಿದ ವಾತಾವರಣದ ಜೊತೆ ತುಂತುರು ಮಳೆಯೂ ಇರಲಿದೆ. ಕಳೆದ ಎರಡು ದಿನಗಳಲ್ಲಿ ಬೆಂಗಳೂರಿನಲ್ಲಿ ಕನಿಷ್ಠ ತಾಪಮಾನ ೧೪ ಡಿಗ್ರಿಗೆ ಇಳಿಕೆಯಾಗಿದೆ. ಬೆಂಗಳೂರಿನಲ್ಲಿಂದು ಕನಿಷ್ಠ ಉಷ್ಣಾಂಶ ೧೬ ಡಿಗ್ರಿ ಇರಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಡಾ: ಸಿ ಎಸ್ ಪಾಟೀಲ್ ತಿಳಿಸಿದ್ದಾರೆ. ಕರ್ನಾಟಕದ ದಕ್ಷಿಣ ಒಳನಾಡು ಜಿಲ್ಲೆಗಳಾದ ಬೆಂಗಳೂರು, ರಾಮನಗರ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಲ್ಲಿ ಇಂದು ಮತ್ತು ನಾಳೆ ತುಂತುರು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಮಾನ ಇಲಾಖೆ ಎಚ್ಚರಿಕೆ ನೀಡಿದೆ.

<><><><>

ಕೋಲಾರ ಜಿಲ್ಲೆಯ ಗ್ರಾಮೀಣ ಭಾಗದಲ್ಲಿ ಗ್ರಾಮ ಒನ್ ಯೋಜನೆಯನ್ನು ವಿಸ್ತರಿಸುವ ಸಲುವಾಗಿ ಗ್ರಾಮ ಒನ್ ಕೇಂದ್ರಗಳನ್ನು ಸ್ಥಾಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದೇ ೧೫ರವರೆಗೆ ಅವಕಾಶವಿದೆ. ಮಾಗೊಂದಿ, ಬಲಮಂದೆ, ಕೇತನಗಾಹಳ್ಳಿ, ಮಾರ್ಜೇನಹಳ್ಳಿ, ಸುಗಟೂರು, ವಡಗೂರು, ಸೇರಿದಂತೆ ಹಲವು ಗ್ರಾಮಗಳಲ್ಲಿ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿಗಳನ್ನು www.karnatakaone.gov.in/Public/ GramOne Franchisee Terms ಲಿಂಕ್ ಮೂಲಕ ಸಲ್ಲಿಸಬಹುದೆಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><><><>**